**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE 6/6/2

83 | ರಾಯಚೂರು 356 | ವಿಜಯಪುರ 187

# ಖರ್ಗೆಗೆ ಒಲಿದ ಮೇಲ್ಮನೆ ಅದೃಷ್ಟ

ಉವಾ 6/6/20

## ಗೌಡರ ಸ್ಪರ್ಧೆಗೆ ಜೆಡಿಎಸ್ ಒತ್ತಾಯ । ಇಂದು ಬಿಜೆಪಿ ಆಯ್ಕೆ



**ಬೆಂಗಳೂರು:** ರಾಜ್ಯ ವಿಧಾನಸಭೆಯಿಂದ ರಾಜ್ಯಸಭೆಗೆ ನಡೆಯುವ ಚುನಾವಣೆಗೆ ಕಾಂಗ್ರೆಸ್ ಅಭ್ಯರ್ಥಿಯಾಗಿ ಹಿರಿಯ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರನ್ನು ಕಣಕ್ಕಿಳಿಸಲಾಗಿದೆ.

ಈ ಮೂಲಕ ಲೋಕಸಭೆ ಚುನಾವಣೆಯಲ್ಲಿ ಸೋತರೂ ಹಿರಿತನ ಪರಿಗಣಿಸಿ ಸಮುದಾಯದ ವಿಶ್ವಾಸ ಪಡೆಯುವ ನಿಟ್ಟಿನಲ್ಲಿ ಕಾಂಗ್ರೆಸ್ ಹೈಕಮಾಂಡ್ ಖರ್ಗೆ ಅವರಿಗೆ ಮಣೆ ಹಾಕಿದೆ.

ಮತ್ತೊಂದೆಡೆ ಜೆಡಿಎಸ್ ಶಾಸಕಾಂಗ ಪಕ್ಷದ ಸಭೆಯಲ್ಲಿ ದೇವೇಗೌಡರು ರಾಜ್ಯಸಭೆ ಚುನಾವಣೆಗೆ ಸ್ಪರ್ಧೆ ಮಾಡಬೇಕು ಎಂಬ ಒಕ್ಕೊರಲ ಒತ್ತಾಯ ಕೇಳಿಬಂದಿದ್ದು ಅಂತಿಮ ತೀರ್ಮಾನ ದೇವೇಗೌಡರಿಗೆ ಬಿಡಲಾಗಿದೆ. ಇದರ ನಡುವೆ ಬಿಜೆಪಿ ಕೋರ್ ಕಮಿಟಿ ಸಭೆ ಶನಿವಾರ ನಡೆಯಲಿದ್ದು ರಾಜ್ಯಸಭೆ ಅಭ್ಯರ್ಥಿಗಳ ಆಯ್ಕೆ ಅಂತಿಮಗೊಳ್ಳುವ ಸಾಧ್ಯತೆಯಿದೆ.

**ಖರ್ಗೆ ಆಯ್ಕೆ ಖಚಿತ:** ಕಾಂಗ್ರೆಸ್ ಅಭ್ಯರ್ಥಿ ಆಯ್ಕೆ ಸಂಬಂಧ ಎಐಸಿಸಿ ಅಧ್ಯಕ್ಷೆ ಸೋನಿಯಾ ಗಾಂಧಿ ಅವರ ಅನುಮತಿ ಮೇರೆಗೆ ಪಕ್ಷದ ಕೇಂದ್ರ ಚುನಾವಣಾ ಸಮಿತಿ ಪ್ರಧಾನ ಕಾರ್ಯದರ್ಶಿ ಮುಕುಲ್ ವಾಸ್ನಿಕ್ ಮಲ್ಲಿಕಾರ್ಜುನ ಖರ್ಗೆ ಅವರನ್ನು ಅಧಿಕೃತ ಅಭ್ಯರ್ಥಿಯಾಗಿ ಆದೇಶ ಹೊರಡಿಸಿದ್ದಾರೆ.

ರಾಜ್ಯಸಭೆಗೆ ಚುನಾವಣೆ ನಡೆಯುವ ನಾಲ್ಕು ಸ್ಥಾನಗಳಲ್ಲಿ ಕಾಂಗ್ರೆಸ್‌ಗೆ ಒಂದು ಸ್ಥಾನ ದೊರೆಯಲಿದ್ದು, ಉಳಿದ ಮೂರು ಸ್ಥಾನದಲ್ಲಿ ಬಿಜೆಪಿಗೆ ಎರಡು ಸ್ಥಾನ ಪಕ್ಕಾ ಆಗಿವೆ. ಜೆಡಿಎಸ್‌ಗೆ ಒಂದು ಸ್ಥಾನ ದೊರೆಯಬಹುದಾಗಿದೆ. ಬಿ.ಕೆ.ಹರಿಪ್ರಸಾದ್ ಹೆಸರನ್ನು ರಾಜ್ಯ ನಾಯಕರು ಶಿಫಾರಸ್ಸು ಮಾಡಿದ್ದರು ಎಂದು ತಿಳಿದು ಬಂದಿದೆ.

**ಧನ್ಯವಾದ:** ಎಐಸಿಸಿ ಘೋಷಣೆ ನಂತರ ಪ್ರತಿಕ್ರಿಯೆ ನೀಡಿದ ಮಲ್ಲಿಕಾರ್ಜುನ ಖರ್ಗೆ, ಸೋನಿಯಾ, ರಾಹುಲ್ ಗಾಂಧಿಯವರಿಗೆ ಧನ್ಯವಾದ ತಿಳಿಸುತ್ತೇನೆ. ಸಂಸತ್ತಿನಲ್ಲಿ ನನ್ನ ಸೇವೆಯನ್ನು ಗುರುತಿಸಿ ಅಭ್ಯರ್ಥಿಯಾಗಿ ಆಯ್ಕೆ ಮಾಡಿದ್ದಾರೆ. ಪ್ರತಿ ಪಕ್ಷದ ನಾಯಕ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಸೇರಿದಂತೆ ಎಲ್ಲಾ ನಾಯಕರು ಒಮ್ಮತದಿಂದ ಆಯ್ಕೆ ಮಾಡಿದ್ದಾರೆ. ಅವರಿಗೂ ಧನ್ಯವಾದ ಅರ್ಪಿಸುವುದಾಗಿ ತಿಳಿಸಿದರು.

▶ 7ನೇ ಪುಟಕ್ಕೆ

> ನನ್ನ ಮೇಲೆ ಇಟ್ಟಿರುವ ನಂಬಿಕೆಯನ್ನು ಉಳಿಸಿಕೊಳ್ಳುತ್ತೇನೆ. ರಾಜ್ಯಸಭೆಗೆ ಹೋಗಿ ಕೆಲಸ ಮಾಡಲು ಒಳ್ಳೆಯ ಅವಕಾಶ ಸಿಕ್ಕಿದೆ. ದೇವೇಗೌಡರು ಸ್ಪರ್ಧಿಸುವುದು ಅವರ ಪಕ್ಷಕ್ಕೆ ಬಿಟ್ಟ ವಿಚಾರ. ದೇವೇಗೌಡರಿಗೆ ಕಾಂಗ್ರೆಸ್ ಬೆಂಬಲಿಸುವುದು ಹೈಕಮಾಂಡ್‌ಗೆ ಬಿಟ್ಟಿದ್ದು.
>
> • ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ ಹಿರಿಯ ನಾಯಕ

### ಸರ್ಕಾರ ಕೆಡವಲು ಆಸಕ್ತಿ ಇಲ್ಲ: ಎಚ್‌ಡಿಕೆ



ನನಗೆ ರಾಜ್ಯ ಬಿಜೆಪಿ ಸರ್ಕಾರವನ್ನು ಕೆಡವುವ ಆಸಕ್ತಿ ಇಲ್ಲ. ಬಿಜೆಪಿಯಲ್ಲಿನ ಭಿನ್ನಮತ ನನಗೆ ಸಂಬಂಧಿಸಿದ್ದಲ್ಲ ಎಂದು ಮಾಜಿ ಸಿಎಂ ಕುಮಾರಸ್ವಾಮಿ ಹೇಳಿದರು. ಅಧಿಕಾರಕ್ಕಾಗಿ ನನ್ನ ಸರ್ಕಾರ ಕೆಡವಿದವರೇ ಇದೀಗ ಯಡಿಯೂರಪ್ಪ ಸರ್ಕಾರ ಕೆಡವಲು ಮುಂದಾಗಿದ್ದಾರೆ ಎಂಬುದು ಮಾಧ್ಯಮಗಳಲ್ಲಿ ನೋಡಿದ್ದೇನೆ. ನನಗೆ ರಾಜ್ಯದ ಪ್ರಸಕ್ತ ಸ್ಥಿತಿ ನಿಯಂತ್ರಣ ಮುಖ್ಯ, ಈ ವಿಚಾರದಲ್ಲಿ ಆಗಿರುವ ಲೋಪ ತಿದ್ದಿಕೊಳ್ಳಿ ಎಂದು ಸಲಹೆ ನೀಡಿದ್ದೇನೆ ಎಂದರು.

### ಬೆಂಬಲ ಯಾರೂ ಕೇಳಿಲ್ಲ

ಖರ್ಗೆ ಅವರನ್ನು ರಾಜ್ಯಸಭಾ ಕಳುಹಿಸುವ ಬಗ್ಗೆ ಪಕ್ಷದ ರಾಷ್ಟ್ರೀಯ ನಾಯಕರು ನಿರ್ಧಾರ ತೆಗೆದುಕೊಂಡಿದ್ದಾರೆ. ಜೂ. 8 ರಂದು ನಾಮ[illegible] ಕೇಳಲು ಯಾವುದೇ ಕಾರ್ಯಕರ್ತರು ಬರ[illegible] ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಸೂಚಿಸಿದ್ದಾರೆ. ರಾಜ್ಯಸಭೆ ಚುನಾವಣೆಯಲ್ಲಿ ಬೆಂಬಲ ನೀಡುವಂತೆ ಜೆಡಿಎಸ್‌ನಿಂದ ಯಾರೂ ಸಂಪರ್ಕಿಸಿಲ್ಲ. ನಮ್ಮ ಪಕ್ಷದ ನಾಯಕರು ಏನು ತೀರ್ಮಾನ ಮಾಡಿರುತ್ತಾರೆ ಅದಕ್ಕೆ ನಾನು ಬದ್ಧನಾಗಿದ್ದೇನೆ. ಈ ವಿಚಾರವಾಗಿ ತಮ್ಮ ಬಳಿ ಯಾರೂ ಚರ್ಚೆ ಮಾಡಿಲ್ಲ ಎಂದೂ ಅವರು ಹೇಳಿದ್ದಾರೆ.

### ಒತ್ತಾಯ ಇದೆ

ದೇವೇಗೌಡರು ರಾಜ್ಯಸಭೆಗೆ ಹೋಗಬೇಕು ಎಂಬುದು ಬಹುತೇಕ ಶಾಸಕರ ಒತ್ತಾಯ ಇದೆ. ಆದರೆ, ಈ ಬಗ್ಗೆ ದೇವೇಗೌಡರು ತೀರ್ಮಾನ ಕೈಗೊಳ್ಳಬೇಕು. ಅವರು ಸ್ಪರ್ಧೆ ಬಗ್ಗೆ ಇದುವರೆಗೂ ಏನೂ ಹೇಳಿಲ್ಲ. ಮುಂದೆ ಅವರ ನಿರ್ಧಾರವೇ ಅಂತಿಮ ಎಂದು ಮಾಜಿ ಸಿಎಂ ಎಚ್.ಡಿ.ಕುಮಾರಸ್ವಾಮಿ ಹೇಳಿದ್ದಾರೆ. ಜೆಡಿಎಲ್‌ಪಿ ಸಭೆಯ ನಂತರ ಮಾತನಾಡಿದ ಅವರು, ಕಾಂಗ್ರೆಸ್‌ಗೆ ಎರಡನೇ ಅಭ್ಯರ್ಥಿ ಗೆಲ್ಲಿಸಿಕೊಳ್ಳಲು ಮತಗಳ ಕೊರತೆ ಇದೆ, ಬಿಜೆಪಿಗೂ ಮೂರನೇ ಅಭ್ಯರ್ಥಿ ಗೆಲ್ಲಲು ಮತಗಳ ಕೊರತೆ ಇದೆ. ಹೀಗಾಗಿ, ಜೆಡಿಎಸ್ ಅಭ್ಯರ್ಥಿ ಇಳಿಸಲು ಮತಗಳು ಬೇಕು. ದೇವೇಗೌಡರು ಸ್ಪರ್ಧೆ ಮಾಡಿದರೆ ಕಾಂಗ್ರೆಸ್, ಬಿಜೆಪಿ ಇನ್ನೊಂದು ಅಭ್ಯರ್ಥಿ ಹಾಕದು ಎಂಬುದು ಶಾಸಕರ ಅಭಿಪ್ರಾಯ. ಇನ್ನೂ ಕಾಲಾವಕಾಶ ಇರುವುದರಿಂದ ನೋಡೋಣ ಎಂದು ತಿಳಿಸಿದರು.

---

# ಖರ್ಗೆಗೆ ಒಲಿದ ಮೇಲ್ಮನೆ ಅದೃಷ್ಟ

ಉವಾ 6/6/20

1ನೇ ಪುಟದಿಂದ ▶ **ಜೆಡಿಎಲ್‌ಪಿ ಒತ್ತಾಯ:** ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು ರಾಜ್ಯಸಭೆ ಚುನಾವಣೆ ಸ್ಪರ್ಧೆ ಮಾಡಬೇಕು ಎಂದು ಜೆಡಿಎಲ್‌ಪಿ ಒಕ್ಕೊರಲ ಮನವಿ ಮಾಡಿದ್ದು, ಅಂತಿಮ ತೀರ್ಮಾನ ದೇವೇಗೌಡರಿಗೆ ಬಿಡಲಾಗಿದೆ. ಜೆಪಿ ಭವನದಲ್ಲಿ ಶುಕ್ರವಾರ ನಡೆದ ಜೆಡಿಎಸ್ ಶಾಸಕಾಂಗ ಪಕ್ಷದಲ್ಲಿ ಎಲ್ಲರೂ ಪ್ರಸಕ್ತ ರಾಜಕೀಯ ಸಂದರ್ಭದಲ್ಲಿ ಅನುಭವಿ ರಾಜಕಾರಣಿ ದೇವೇಗೌಡರು ರಾಜ್ಯಸಭೆಯಲ್ಲಿ ಇರಬೇಕು ಎಂಬ ಅಭಿಪ್ರಾಯಪಟ್ಟು ಒಕ್ಕೊರಲ ಒತ್ತಾಯ ಮಾಡಿದರು. ಸಭೆಯ ಅಭಿಪ್ರಾಯವನ್ನು ದೇವೇಗೌಡರಿಗೆ ತಿಳಿಸುವಂತೆ ಶಾಸಕಾಂಗ ಪಕ್ಷದ ನಾಯಕ ಎಚ್.ಡಿ.ಕುಮಾರಸ್ವಾಮಿ ಹಾಗೂ ರಾಜ್ಯಾಧ್ಯಕ್ಷ ಎಚ್.ಕೆ.ಕುಮಾರಸ್ವಾಮಿ, ಹಿರಿಯ ನಾಯಕ ಬಸವರಾಜ ಹೊರಟ್ಟಿ ಅವರಿಗೆ ಮನವಿ ಮಾಡಲಾಯಿತು. ದೇವೇಗೌಡರು ಸ್ಪರ್ಧೆ ಮಾಡಿದರೆ ಬಿಜೆಪಿ ಹಾಗೂ ಕಾಂಗ್ರೆಸ್ ಮತ್ತೊಂದು ಅಭ್ಯರ್ಥಿ ಹಾಕಲಾರದು. ಹೀಗಾಗಿ, ಒಮ್ಮೆ ಕಾಂಗ್ರೆಸ್ ನಾಯಕರ ಜತೆಯೂ ಚರ್ಚಿಸಿ ತೀರ್ಮಾನ ಕೈಗೊಳ್ಳಿ, ದೇವೇಗೌಡರು ರಾಜ್ಯಸಭೆಗೆ ಹೋಗಬೇಕು ಎಂದು ಸಭೆಯಲ್ಲಿ ಎಲ್ಲ ಶಾಸಕರು ಪ್ರತಿಪಾದಿಸಿದರು ಎಂದು ಮೂಲಗಳು ತಿಳಿಸಿವೆ. ಹೀಗಾಗಿ, ಕಾಂಗ್ರೆಸ್‌ನ ರಾಜ್ಯ ಹಾಗೂ ಕೇಂದ್ರ ನಾಯಕರ ಗ್ರೀನ್ ಸಿಗ್ನಲ್ ದೊರೆತರೆ ಗೌಡರು ಸ್ಪರ್ಧೆ ಮಾಡುವ ಸಾಧ್ಯತೆ ಹೆಚ್ಚಾಗಿದೆ ಎಂದು ಹೇಳಲಾಗಿದೆ.